# ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ

(CIN) : U40109KA2004SGC035177
ನಿಗಮ ಕಛೇರಿ : ನಂ. 29, ವಿಜಯನಗರ,
2ನೇ ಹಂತ, ಹಿನಕಲ್
ಮೈಸೂರು–570 017
www.cescmysore.org

ರವರ ಕಛೇರಿ
ಸಹಾಯಕ ಕಾರ್ಯಪಾಲಕ ಇಂಜಿನಿಯರ್(ವಿ)
ಕಾರ್ಯ ಮತ್ತು ಪಾಲನೆ ಉಪ–ವಿಭಾಗ,
ಸೆಸ್ಕ್, ಬೇಲೂರು.
ದೂ.ಸಂ. 08177-222223
E.Mail : aeehsnbelur@rediffmail.com

ಕ್ರಮಾಂಕ : ಸ.ಕಾ.ಇಂ(ವಿ)/ಸ.ಇಂ(ತಾಂ)/ಬೇ/2019-20/F-16/ 2724.25 ದಿನಾಂಕ : 8.11.19

## ಜನಸಂಪರ್ಕ ಸಭೆಯ ನಡವಳಿಗಳು

ದಿನಾಂಕ : 19.10.19 ಶನಿವಾರದಂದು ಶ್ರೀಯುತ ಜಗದೀಶ್, ಕಾರ್ಯಪಾಲಕ ಇಂಜಿನಿಯರ್(ವಿ), ಸಕಲೇಶಪುರ ರವರ ಅಧ್ಯಕ್ಷತೆಯಲ್ಲಿ ಬೇಲೂರು ಉಪವಿಭಾಗ ಕಛೇರಿಯಲ್ಲಿ ನಡೆಸಿದ ಜನಸಂಪರ್ಕ ಸಭೆಯ ನಡವಳಿಗಳು.

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ವಿವರ ;**

1. ಶ್ರೀಮತಿ ಕವಿತಾ.ಹೆಚ್.ಆರ್., ಸಹಾಯಕ ಕಾರ್ಯಪಾಲಕ ಇಂಜಿನಿಯರ್(ವಿ), ಬೇಲೂರು.
2. ಶ್ರೀ ಕುಮಾರ್ ಎನ್. ಡಿ. ಸಹಾಯಕ ಇಂಜಿನಿಯರ್(ವಿ), ಬೇಲೂರು ನಗರ ಶಾಖೆ.
3. ಶ್ರೀ ಡಿ. ಸಂತೋಷ್ ಕುಮಾರ್, ಕಿರಿಯ ಇಂಜಿನಿಯರ್(ವಿ), ಹಳೇಬೀಡು/ಅರೇಹಳ್ಳಿ ಶಾಖೆ.
4. ಶ್ರೀ ಯೋಗೇಶ್, ಕಿರಿಯ ಇಂಜಿನಿಯರ್(ವಿ), ಹಗರೆ ಶಾಖೆ.
5. ಶ್ರಿ ಕೃಷ್ಣ, ಕಿರಿಯ ಇಂಜಿನಿಯರ್(ವಿ), ತೊಳಲು ಶಾಖೆ.
6. ಶ್ರೀ ಎಂ. ಎನ್. ಗುರುಪ್ರಸಾದ್, ಹಿರಿಯ ಸಹಾಯಕರು, ಕಂದಾಯ ಶಾಖೆ, ಬೇಲೂರು ಉಪವಿಭಾಗ.
7. ಶ್ರೀ ಸುರೇಶ್, ಪ್ರಬಾರಿ ಹಿರಿಯ ಸಹಾಯಕರು, ಕಂದಾಯ ಶಾಖೆ, ಅರೇಹಳ್ಳಿ.

**ಶ್ರೀಯುತರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರುಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಮಧ್ಯಾಹ್ನ 11 : 00 ಗಂಟೆಗೆ ಪ್ರಾರಂಭ ಮಾಡಿದರು.**

---

**ಜನಸಂಪರ್ಕ ಸಭೆಯಲ್ಲಿ ದಾಖಲಾದ ದೂರಿನ ವಿವರಗಳು ಈ ಕೆಳಕಂಡಂತೆ ಇರುತ್ತದೆ ;**

1. ಶ್ರೀಮತಿ ಜಯಮ್ಮ ಕೋಂ ಲೇಟ್ ಸಿದ್ದಯ್ಯ, ಬೆಣ್ಣೂರುರವರು ತಮ್ಮ ಜಮೀನಿನಲ್ಲಿ ಹಾದು ಹೋಗಿರುವ ವಿದ್ಯುತ್ ಮಾರ್ಗ ಹಾಗೂ ಕಂಬವನ್ನು ತೆರವುಗೊಳಿಸಿಕೊಡಬೇಕೆಂದು ಕೋರಲಾಯಿತು.

ಇದಕ್ಕೆ ಸಂಬಂಧಿಸಿದಂತೆ ಸಭೆಯ ಅಧ್ಯಕ್ಷರು ಅರೇಹಳ್ಳಿ ಶಾಖಾಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

2. ಶ್ರೀಮತಿ ಜಯಮ್ಮ ಕೋಂ ವೆಂಕಟೇಶ್, ರಣಘಟ್ಟ ರವರು ತಮ್ಮ ಆಶ್ರಯ ಮನೆಗೆ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲು 3 ಕಂಬವನ್ನು ಅಳವಡಿಸಿಕೊಡುವಂತೆ ಕೋರಿದರು.

ಇದಕ್ಕೆ ಸಂಬಂಧಿಸಿದಂತೆ ಸಭೆಯ ಅಧ್ಯಕ್ಷರು ಗ್ರಾಹಕರಿಗೆ ವಿದ್ಯುತ್ ಸಂಪರ್ಕವನ್ನು ಪಡೆಯಲು ಅರ್ಜಿಯನ್ನು ನೋಂದಾಯಿಸಬೇಕಾಗಿ ತಿಳಿಸಲಾಯಿತು.

3. ಶ್ರೀ ವೀರೇಶ್ ಗೌಡ ಬಿನ್ ಮಟ್ಟಸ್ವಾಮಿಗೌಡ, ಇಂಟಿತೊಳಲು ರವರು ತಮ್ಮ ಜನತಾ ಮನೆಗೆ DDUGJY ಯೋಜನೆಯಡಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲು ಕೋರಿರುತ್ತಾರೆ.

ಇದಕ್ಕೆ ಸಂಬಂಧಿಸಿದಂತೆ ಸಭೆಯ ಅಧ್ಯಕ್ಷರು ಅರೇಹಳ್ಳಿ ಶಾಖಾಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ತಿಳಿಸಲಾಯಿತು.

**ಶ್ರೀಯುತರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರುಗಳನ್ನು ವಂದಿಸುವ ಮೂಲಕ ಸಭೆಯನ್ನು ಸಂಜೆ 2 : 30 ಕ್ಕೆ ಮುಕ್ತಾಯಗೊಳಿಸಲಾಯಿತು.**

8/11

ಸಹಾಯಕ ಕಾರ್ಯಪಾಲಕ ಇಂಜಿನಿಯರ್(ವಿ)
ಕಾ ಮತ್ತು ಪಾ ಉಪ–ವಿಭಾಗ, ಸೆಸ್, ಬೇಲೂರು.